# ಮೈಸೂರು ವಿಶ್ವವಿದ್ಯಾನಿಲಯ

**ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ಸಿಂಡಿಕೇಟ್ ಸಭಾಂಗಣದಲ್ಲಿ ವಿಶ್ವವಿದ್ಯಾನಿಲಯದ 101ನೇ ವಾರ್ಷಿಕ ಘಟಿಕೋತ್ಸವದ ಪೂರ್ವಭಾವಿಯಾಗಿ ದಿನಾಂಕ: 07-09-2021 ರಂದು ಬೆಳಗ್ಗೆ 9.00 ಗಂಟೆಗೆ ಜರುಗಿದ ವಿಶೇಷ ಸಿಂಡಿಕೇಟ್ ಸಭೆಯ ನಡವಳಿಗಳು**

<u>ಹಾಜರಿದ್ದ ಸದಸ್ಯರುಗಳು:</u>

| | | |
|---|---|---|
| 1. | ಪ್ರೊ. ಜಿ.ಹೇಮಂತಕುಮಾರ್ | ಕುಲಪತಿಗಳು ಹಾಗೂ ಅಧ್ಯಕ್ಷರು |
| 2. | ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಇವರ ಪರವಾಗಿ ಶ್ರೀ ಕೆ.ಸಿ ವೀರಭದ್ರಯ್ಯ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಮೈಸೂರು. | ಸದಸ್ಯರು |
| 3. | ಪ್ರೊ. ಜಿ.ವೆಂಕಟೇಶ್ ಕುಮಾರ್ | ಸದಸ್ಯರು |
| 4. | ಶ್ರೀ ಎಂ.ಬಿ. ಗಪ್ಪಣ್ಣ | ಸದಸ್ಯರು |
| 5. | ಡಾ. ಚೈತ್ರ ನಾರಾಯಣ | ಸದಸ್ಯರು |
| 6. | ಡಾ. ವೆಂಕಟೇಶಯ್ಯ | ಸದಸ್ಯರು |
| 7. | ಡಾ. ನಾಗರಾಜು | ಸದಸ್ಯರು |
| 8. | ಡಾ. ಬಿ.ರಾಜಣ್ಣ | ಸದಸ್ಯರು |
| 9. | ಡಾ. ವೆಂಕಟೇಶ್ ಜೆ ಎನ್ | ಸದಸ್ಯರು |
| 10. | ಶ್ರೀ. ಆರ್.ಪ್ರದೀಪ್ ಕುಮಾರ್ ದೀಕ್ಷಿತ್ | ಸದಸ್ಯರು |
| 11. | ಶ್ರೀ ಎಸ್.ಡಿ.ದೊಡ್ಡಚಾರಿ | ಸದಸ್ಯರು |
| 12. | ಶ್ರೀಮತಿ ವೈ.ಕೆ.ಪವಿತ್ರ | ಸದಸ್ಯರು |
| 13. | ಡಾ. ಈ.ಸಿ.ನಿಂಗರಾಜ್ ಗೌಡ | ಸದಸ್ಯರು |
| 14. | ಡಾ. ಎಂ.ಎಸ್.ದಾಮೋಧರ | ಸದಸ್ಯರು |
| 15. | ಪ್ರೊ. ಎ.ಪಿ.ಜ್ಞಾನ ಪ್ರಕಾಶ್, ಕುಲಸಚಿವರು (ಪರೀಕ್ಷಾಂಗ) | ಸದಸ್ಯರು |
| 16. | ಡಾ. ಸಂಗೀತಾ ಗಜಾನನ್ ಭಟ್, ಹಣಕಾಸು ಅಧಿಕಾರಿಗಳು | ಸದಸ್ಯರು |
| 17. | ಪ್ರೊ. ಆರ್.ಶಿವಪ್ಪ | ಕುಲಸಚಿವರು ಹಾಗೂ ಸದಸ್ಯ ಕಾರ್ಯದರ್ಶಿ |

<u>ಹಾಜರಾಗದ ಸದಸ್ಯರು:</u>

1. ಡಾ. ಸೈಯದ್ ಕಾರ್ಝು ಮೊಹಿದ್ದೀನ್
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
3. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
4. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
5. ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.

ಮೊದಲಿಗೆ ಸನ್ಮಾನ್ಯ ಕುಲಪತಿಗಳು ಸಿಂಡಿಕೇಟ್ ವಿಶೇಷ ಸಭೆಗೆ ಆಗಮಿಸಿದ್ದ ಎಲ್ಲಾ ಸದಸ್ಯರುಗಳನ್ನು ಆಹ್ವಾನಿಸಿದರು ಮತ್ತು ಚರಿತ್ರಾರ್ಹವಾದ ಮೈಸೂರು ವಿಶ್ವವಿದ್ಯಾನಿಲಯದ 101ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ಗೌರವ ಡಾಕ್ಟರೇಟ್ ಪದವಿಯನ್ನು ಮತ್ತು ವಿವಿಧ ಕೋರ್ಸುಗಳ ಪದವಿಗಳನ್ನು ಪ್ರದಾನಿಸುವ ಸಲುವಾಗಿ ವಿಶ್ವವಿದ್ಯಾನಿಲಯದ ಎಲ್ಲಾ ನಿಕಾಯಗಳ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಸಿದ್ದಪಡಿಸಿ ವಿಶೇಷ ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸಲಾಗಿದೆ ಎಂದು ತಿಳಿಸಿದರು.

...ಮು.ತಿ.ನೊ

| | |
|---|---|
| ವಿಷಯ ಸಂಖ್ಯೆ: 9.1 | 101ನೇ ವಾರ್ಷಿಕ ಘಟಿಕೋತ್ಸವದ ಅಭ್ಯರ್ಥಿಗಳ ಪಟ್ಟಿಯನ್ನು ಅನುಮೋದಿಸುವ ಬಗ್ಗೆ. |
| ತೀರ್ಮಾನ | ವಿವಿಧ ಪದವಿಗಳನ್ನು 101ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪ್ರದಾನಿಸುವ ಸಲುವಾಗಿ ಮಂಡಿಸಿರುವ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಸಿಂಡಿಕೇಟ್ ಮಂಡಳ ಸಭೆಯಲ್ಲಿ ಸರ್ವಾನುಮತದಿಂದ ಅನುಮೋದಿಸಿತು. |
| ವಿಷಯ ಸಂಖ್ಯೆ:9.2 | 101ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡುವ ಬಗ್ಗೆ. |
| ತೀರ್ಮಾನ | ಕುಲಾಧಿಪತಿಗಳ ಕಾರ್ಯದರ್ಶಿಯವರ ದಿನಾಂಕ: 03-09-20ರ ಅದೇಶದನ್ವಯ 101ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪದ್ಮಭೂಷಣ ಡಾ. ಗೋವಿಂದರಾಜನ್ ಪದ್ಮನಾಭನ್, ಗೌರವ ಪ್ರಾಧ್ಯಾಪಕರು, ಜೀವರಸಾಯನಶಾಸ್ತ್ರ ವಿಭಾಗ, ಭಾರತೀಯ ವಿಜ್ಞಾನ ಸಂಸ್ಥೆ, ಬೆಂಗಳೂರು ಮತ್ತು ಶ್ರೀ ಪ್ರಶಾಂತ್ ಪ್ರಕಾಶ್, ಅಧ್ಯಕ್ಷರು, ವಿಷನ್ ಗ್ರೂಪ್ ಫಾರ್ ಸ್ಟಾರ್ಟ್‌ಅಪ್ಸ್, ಕರ್ನಾಟಕ ಸರ್ಕಾರ, ಬೆಂಗಳೂರು ಇವರುಗಳಿಗೆ ಗೌರವ ಡಾಕ್ಟರೇಟ್ (D.Sc) ಪದವಿ ಪ್ರದಾನ ಮಾಡಲು ಕುಲಾಧಿಪತಿಗಳು ಅನುಮೋದಿಸಿರುವುದನ್ನು ಸಿಂಡಿಕೇಟ್ ಸಭೆಯು ಅನುಸಮರ್ಥಿಸಿತು. |

ಕೊನೆಯಲ್ಲಿ ಅಧ್ಯಕ್ಷರು ಎಲ್ಲರಿಗೂ ವಂದಿಸಿ, 101ನೇ ವಾರ್ಷಿಕ ಘಟಿಕೋತ್ಸವದ ಕಾರ್ಯಕ್ರಮವು ಯಶಸ್ವಿಯಾಗಿ ನೆರವೇರಲು ಎಲ್ಲಾ ಸದಸ್ಯರುಗಳು ಸಹಕರಿಸಬೇಕೆಂದು ಕೋರುತ್ತಾ, ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ಕುಲಸಚಿವ ಹಾಗೂ ಸದಸ್ಯ ಕಾರ್ಯದರ್ಶಿ

ಕುಲಪತಿ ಹಾಗೂ ಅಧ್ಯಕ್ಷರು